# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | (96) 108 |
| ಮಾನ್ಯ ಸದಸ್ಯರ ಹೆಸರು | ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 08-12-2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಬಹುತೇಕ ಆಸ್ಪತ್ರೆಗಳಲ್ಲಿ ಗ್ರೂಪ್ 'ಡಿ' ಹುದ್ದೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಬಂದಿದೆ. |
| ಆ) | ಮಂಜೂರಾಗಿರುವ ಗ್ರೂಪ್ 'ಡಿ' ಹುದ್ದೆಗಳ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ಗ್ರೂಪ್ 'ಡಿ' ಹುದ್ದೆಗಳೆಷ್ಟು; (ವಿವರ ನೀಡುವುದು) | ಇಲಾಖೆಯಲ್ಲಿ ಮಂಜೂರಾದ ಮತ್ತು ಕಾರ್ಯ ನಿರತ ಗ್ರೂಪ್ -ಡಿ ಹುದ್ದೆಗಳ ಮಾಹಿತಿ ಈ ಕೆಳಕಂಡಂತಿದೆ:-<br><table><tr><td>ಪದನಾಮ</td><td>ಮಂಜೂರು</td><td>ಕಾರ್ಯನಿರತ</td><td>ಖಾಲಿ</td></tr><tr><td>Group – D</td><td>14353</td><td>4296</td><td>10057</td></tr></table> |
| ಇ) | ಖಾಲಿ ಇರುವ ಗ್ರೂಪ್ 'ಡಿ' ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? | ಸರ್ಕಾರದ ಆದೇಶ ಸಂಖ್ಯೆ: ಆಕುಕ 178 ಹೆಚ್‌ಎಸ್‌ಎಂ 2025, ದಿನಾಂಕ: 30.06.2025 ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ರಾಜ್ಯವಲಯದ ಆಸ್ಪತ್ರೆಗಳಲ್ಲಿ ಖಾಲಿ ಇರುವ ಗ್ರೂಪ್-ಡಿ ಹುದ್ದೆಗಳ ಪೈಕಿ ಶೇ.80 ರಷ್ಟು (80%) ಹುದ್ದೆಗಳನ್ನು ಕೆಲವೊಂದು ಷರತ್ತಿಗೊಳಪಟ್ಟು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಿ ಆದೇಶಿಸಲಾಗಿದೆ.<br><br>ಅದರನ್ವಯ ರಾಜ್ಯವಲಯದ ಆಸ್ಪತ್ರೆಗಳಲ್ಲಿ ಖಾಲಿ ಇರುವ ಶೇ.80 ರಷ್ಟು ಹುದ್ದೆಗಳಲ್ಲಿ ಶೇ.40 ರಷ್ಟು ನಾನ್ ಕ್ಲಿನಿಕಲ್ ನೌಕರರನ್ನು ಸೇವಾ ಗುತ್ತಿಗೆ ಆಧಾರದ ಮೇಲೆ ಹಾಗೂ ಶೇ.40 ರಷ್ಟು ಗ್ರೂಪ್-ಡಿ ನೌಕರರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಂಡು ಕೊರತೆಯನ್ನು ನಿವಾರಿಸಲಾಗಿರುತ್ತದೆ.<br><br>ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಒಟ್ಟು 668 ಗ್ರೂಪ್ -ಡಿ ಹುದ್ದೆಗಳು ಮಂಜೂರಾಗಿದ್ದು, ಆಸ್ಪತ್ರೆಗಳಲ್ಲಿ 583 ಗ್ರೂಪ್ -ಡಿ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ. |

ಸಂಖ್ಯೆ: ಆಕುಕ 306 ಹೆಚ್‌ಎಂಎಸ್ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು